(2)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸುವ ಬಗ್ಗೆ.

**ಓದಲಾಗಿದೆ:** 1) ದಿ: 24-01-2013ರ ಆದೇಶ ಸಂಖ್ಯೆ ಕೃಇ 194 ಕೃವಿವಿ 2011.
2) ತಿದ್ದುಪಡಿ ಸಂಖ್ಯೆ ಕೃಇ 194 ಕೃವಿವಿ 2011 ದಿ: 25-02-2013.

*** **** ***

**ಪ್ರಸ್ತಾವನೆ:**

ಮೇಲೆ(1)ರಲ್ಲಿ ಓದಲಾದ ದಿನಾಂಕ 24-01-2013ರ ಆದೇಶದಲ್ಲಿ, ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಕೃಷಿ ಮಹಾವಿದ್ಯಾಲಯವನ್ನು ಸ್ಥಾಪಿಸುವ ಕ್ರಮಕ್ಕಾಗಿ ಆಡಳಿತಾತ್ಮಕ ಅನುಮತಿ ನೀಡಲಾಗಿದೆ. ಸದರಿ ವಿಷಯದಲ್ಲಿ ಮೇಲೆ(2)ರಲ್ಲಿ ಓದಲಾದಂತೆ ದಿನಾಂಕ 25-02-2013ರಂದು ತಿದ್ದುಪಡಿಯನ್ನು ಹೊರಡಿಸಿರುತ್ತದೆ.

2. ರಾಜ್ಯದಲ್ಲಿ ಹೊಸ ಕಾಲೇಜುಗಳನ್ನು ತೆರೆಯುವ ಬಗ್ಗೆ ಪರಿಶೀಲಿಸಲು ಡಾ॥ ಎಸ್. ಬಿಸಲಯ್ಯರವರ ನೇತೃತ್ವದಲ್ಲಿ ರಚಿಸಲಾಗಿದ್ದ ಸಮಿತಿಯು ವರದಿ ಸಲ್ಲಿಸಿದ್ದು ಸರ್ಕಾರದ ಪರಿಶೀಲನೆಯಲ್ಲಿದೆ. ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳನ್ನು ಬಲಪಡಿಸುವ ಹಾಗೂ ಅಭಿವೃದ್ಧಿಗೊಳಿಸುವ ಸದುದ್ದೇಶದಿಂದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಪರಿಣಿತ ಸಮಿತಿಯನ್ನು ನೇಮಿಸಿದ್ದು ವರದಿಯನ್ನು ನಿರೀಕ್ಷಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ ಕೃಇ 194 ಕೃವಿವಿ 2011
## ಬೆಂಗಳೂರು, ದಿನಾಂಕ 21-10-2014.

3. ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಡಾ॥ ಎಸ್. ಬಿಸಲಯ್ಯರವರ ನೇತೃತ್ವದ ಸಮಿತಿ ನೀಡಿರುವ ವರದಿಯ ಬಗ್ಗೆ ಅಂತಿಮ ನಿರ್ಣಯ ಕೈಗೊಳ್ಳುವವರೆಗೆ ಹಾಗೂ ಪರಿಣಿತರ ಸಮಿತಿಯು ವರದಿ ನೀಡುವವರೆಗೆ ದಿನಾಂಕ 24-01-2013ರ ಸಮಸಂಖ್ಯೆಯ ಸರ್ಕಾರಿ ಆದೇಶದಲ್ಲಿ, ಗಂಗಾವತಿಯಲ್ಲಿ ಹೊಸದಾಗಿ ಕೃಷಿ ಕಾಲೇಜನ್ನು ಸ್ಥಾಪಿಸಲು ನೀಡಿರುವ ಆಡಳಿತಾತ್ಮಕ ಅನುಮತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಸೇವೆಗಳು ಮತ್ತು ಸಮನ್ವಯ)

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸ ಸೌಧ ಘಟಕ, ಬೆಂಗಳೂರು-560 001 – ಕರ್ನಾಟಕ ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಮತ್ತು ಪ್ರಕಟಿತ ಆದೇಶದ 10 ಪ್ರತಿಗಳನ್ನು ಕೃಷಿ-ಬಿ ಶಾಖೆಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿಗಳು:-

1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ-1&2), ಬೆಂಗಳೂರು.
2. ಕುಲಾಧಿಪತಿಗಳು ಮತ್ತು ಘನವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
5. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
6. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ.
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸಚಿವ ಸಂಪುಟ ಶಾಖೆ (ಸಿ.50/2013)
9. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
15. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ, ನವಿಲೆ-ಶಿವಮೊಗ್ಗ.
16. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕಾ ಇಲಾಖೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಕುಲಸಚಿವರು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
18. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
19. ಫಾರಂ ಸೂಪರಿಂಟೆಂಡೆಂಟ್, ಕೃಷಿ ಸಂಶೋಧನಾ ಕೇಂದ್ರ, ಗಂಗಾವತಿ, ಕೊಪ್ಪಳ ಜಿಲ್ಲೆ.
20. ಶಾಖಾಧಿಕಾರಿಗಳು, ಕೃಷಿ ಇಲಾಖೆ (ಕೃಷಿ ಯೋಜನೆ-ಎ ಮತ್ತು ಬಿ/ಸಮನ್ವಯ).
21. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.